ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 30ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಐದನೇ ಪಟ್ಟಿಯ ರೀತ್ಯಾ.

2. "ಚುನಾವಣಾ ವ್ಯವಸ್ಥೆಯಲ್ಲಿ ಸುಧಾರಣೆಗಳ ಅಗತ್ಯತೆ" ಕುರಿತು ವಿಶೇಷ ಚರ್ಚೆ

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತೇಳನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತೇಳನೇ ಪಟ್ಟಿ

4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ರಿಜ್ವಾನ್ ಅರ್ಷದ್ ಅವರು** – ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ ಆಸ್ಪತ್ರೆಗೆ ಹೊಂದಿಕೊಂಡಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸೇರಿದ ಸ್ಥಳದಲ್ಲಿರುವ ಬುದ್ಧಿಮಾಂದ್ಯ ಮಕ್ಕಳ ಆರೈಕೆ ಕೇಂದ್ರವನ್ನು ಸ್ಥಳಾಂತರ ಮಾಡುತ್ತಿರುವುದರಿಂದ ತೆರವಾಗುವ ಜಾಗವನ್ನು ರೋಗಿಗಳ ಅನುಕೂಲಕ್ಕಾಗಿ ಕಿದ್ವಾಯಿ ಸಂಸ್ಥೆಗೆ ವಹಿಸಿಕೊಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಪಿ. ರಾಜೀವ್ ಅವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆಯಾಗಿದ್ದ ನಿವೇಶನವನ್ನು ಮನೆ ಮಾಲೀಕರು ನಿಯಮ ಬಾಹಿರವಾಗಿ ಧಾರ್ಮಿಕ ಉದ್ದೇಶಕ್ಕಾಗಿ ಬಳಸಲು ಯತ್ನಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 2/

3) **ಶ್ರೀ ಈಶ್ವರ್ ಖಂಡ್ರೆ ಅವರು** – ಆರೋಗ್ಯ ಇಲಾಖೆಯಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿಯಿರುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳಿಗೆ ಡಿಪ್ಲೋಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್ ಪೂರ್ಣಗೊಳಿಸಿರುವ ಅಭ್ಯರ್ಥಿಗಳನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಲಾಲಾಜಿ ಆರ್ ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಪು–ಪಡುಬಿದ್ರಿ ಕಡಲ ಕಿನಾರೆಯನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಹಾಗೂ ಕಾಪು ಬೀಚ್‌ನಲ್ಲಿ ಮೂಲ ಸೌಲಭ್ಯದ ಜೊತೆಗೆ ಸಾರ್ವಜನಿಕರ ರಕ್ಷಣೆಗಾಗಿ ರಕ್ಷಣಾ ದಳವನ್ನು ರಚಿಸುವ ಬಗ್ಗೆ ಮಾನ್ಯ ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

5) **ಶ್ರೀ ವೆಂಕಟರಾವ್ ನಾಡಗೌಡ ಅವರು** – 371ಜೆ ಅಡಿಯಲ್ಲಿ ಸುಳ್ಳು ಪ್ರಮಾಣ ಪತ್ರ ನೀಡಿ ಪ್ರಾಂಶುಪಾಲರುಗಳಾಗಿ ಬಡ್ತಿ ಪಡೆದಿರುವ ಕಲ್ಯಾಣ ಕರ್ನಾಟಕ ಜಿಲ್ಲೆಯವರಲ್ಲದವರನ್ನು ಜೇಷ್ಠತಾ ಪಟ್ಟಿಯಿಂದ ಕೈಬಿಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಲಾಳಸಂಗಿ ಗ್ರಾಮದಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಅಭಯ್ ಪಾಟೀಲ್ ಅವರು** – ಬೆಳಗಾವಿ ನಗರಕ್ಕೆ ನೀರು ಸರಬರಾಜು ಮಾಡುವ ರಕ್ಕಸಕೊಪ್ಪ ಜಲಾಶಯದ ಎತ್ತರವನ್ನು ಹೆಚ್ಚಿಸಿ, ಅನಗತ್ಯವಾಗಿ ಪೋಲಾಗುತ್ತಿರುವ ನೀರನ್ನು ಸಾರ್ವಜನಿಕರ ಉಪಯೋಗಕ್ಕೆ ಬಳಸಿಕೊಳ್ಳುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ ಅವರು** – ಗುಡಿಬಂಡೆ ಹಾಗೂ ಬಾಗೇಪಲ್ಲಿ ತಾಲ್ಲೂಕುಗಳನ್ನು ಒಳಗೊಂಡ ಒಂದು ರೆವಿನ್ಯೂ ಸಬ್ ಡಿವಿಜನ್ ಕಛೇರಿಯನ್ನು ಗೌರಿಬಿದನೂರು ತಾಲ್ಲೂಕಿನಲ್ಲಿ ತೆರೆಯುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
